ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

ಸಿ.ಸಿ.ನಂ.373/2023

ಚಾಸಾ: 4 ಫ್ರಾಸಾ:8

ದಿನಾಂಕಃ 20.01.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿದಾರರ ಹೆಸರು– ಶ್ರೀಧರ್

ತಂದೆಯ ಹೆಸರು– ಪೂಸ್ವಾಮಿ

ವಯಸ್ಸು – 67 ವರ್ಷ

ಉದ್ಯೋಗ– ಖಾಸಗಿ ಕೆಲಸ

ವಾಸ– ಕೆಜಿಎಫ್

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

**1.** ಚಾಸಾ–**1** ಮತ್ತು **3** ನನಗೆ ಗೊತ್ತಿಲ್ಲ. ನಿಪಿ–**5** ರಲ್ಲಿ ಇರುವ ಸಹಿಯನ್ನು ಸಾಕ್ಷಿ ನೋಡಿ ತನ್ನ ಸಹಿ ಎಂದು ಒಪ್ಪಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ–**5**(ಬಿ) ಎಂದು ಗುರುತಿಸಲಾಯಿತು. ಕಳೆದ **7** ವರ್ಷಗಳ ಹಿಂದೆ ನಾನು ದಾರಿಯಲ್ಲಿ ಹೋಗುತ್ತಿರುವಾಗ ಪೋಲೀಸಿನವರು ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಯಾವ ವಿಷಯಕ್ಕೆ ಸಂಬಂಧಿಸಿದಂತೆ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮಹಜರ್ ಮಾಡಿರುವುದಿಲ್ಲ.

(**ಈ ಹಂತದಲ್ಲಿ ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು**)

**ಪಾಟೀ ಸವಾಲುಃಮಾನ್ಯ ಎಪಿಪಿ ರವರಿಂದಃ**

2. ದಿನಾಂಕ 09.07.2019 ರಂದು ಮಧ್ಯಾಹ್ನ 2.30 ರಿಂದ 3.15 ಗಂಟೆ ಸಮಯದಲ್ಲಿ ನನ್ನ, 1 ಮತ್ತು 3 ರವರ ಸಮಕ್ಷಮ ಸ್ಥಳ ಪಂಚನಾಮೆಯನ್ನು ನಿಪಿ–5 ರಂತೆ ಮಾಡಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸುಳ್ಳು. ನಿಪಿ–5 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರೂ ಕೂಡ ನಾನು ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ವಕೀಲರು ಇರುವುದಿಲ್ಲ ಎಂದು ತಿಳಿಸಿರುತ್ತಾರೆ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಜಯಲಕ್ಷ್ಮೀ ಎನ್.ಬಿ)
ಪ್ರಧಾನ ಹಿರಿಯ ಸಿ.ಜೆ. ಮತ್ತು ಜೆಎಂಎಫ್‌ಸಿ
ಕೆಜಿಎಫ್